ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ. ಇಡಿ/ಕೆಇಎ/ಕೆಸೆಟ್/2022-23 ದಿನಾಂಕ. 15.12.2023

# ಪ್ರಕಟಣೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಪರೀಕ್ಷೆಗಳನ್ನು ಸುವ್ಯವಸ್ಥಿತಗೊಳಿಸುವ ನಿಟ್ಟಿನಲ್ಲಿ ವಿಕಲಚೇತನ ಮೀಸಲಾತಿಯನ್ನು ಕೋರಿರುವ ಅಭ್ಯರ್ಥಿಗಳು, ಪರೀಕ್ಷೆಯನ್ನು ಬರೆಯಲು ಪಡೆಯುವ ಲಿಪಿಕರರ ದಾಖಲೆಗಳನ್ನು ಪರಿಶೀಲಿಸಿ ಪ್ರವೇಶ ಪತ್ರವನ್ನು ಪ್ರಕಟಣೆ ಮಾಡಲು ಸಿದ್ಧತೆಗಳನ್ನು ಮಾಡಲಾಗುತ್ತಿದೆ. ವಿಕಲಚೇತನ ಅಭ್ಯರ್ಥಿಗಳ ಜೊತೆಗೆ ಲಿಪಿಕಾರರೂ ಸಹ ಪ್ರವೇಶ ಪತ್ರದೊಂದಿಗೆ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ. ಈ ನಿಟ್ಟಿನಲ್ಲಿ ದಿನಾಂಕ. 12.12.2023ರಂದು ಹೊರಡಿಸಿರುವ ಪ್ರಕಟಣೆಯಲ್ಲಿ ಕೆಸೆಟ್-2023ರ ಪರೀಕ್ಷೆಯನ್ನು ಬರೆಯುವ ವಿಕಲಚೇತನ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಲಿಪಿಕಾರರ ಸೇವೆಯನ್ನು ಬಯಸಿದ್ದಲ್ಲಿ ಅರ್ಜಿದಾರರ ಮಾಹಿತಿಯೊಂದಿಗೆ ಲಿಪಿಕಾರರ ಮಾಹಿತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ಪ್ರಕಟಿಸಿರುವ ಲಿಂಕ್‌ನಲ್ಲಿ ನಮೂದಿಸುವುದು ಕಡ್ಡಾಯವಾಗಿರುತ್ತದೆ ಎಂದು ಸೂಚಿಸಲಾಗಿದೆ.

ಆದರೆ ಕೇವಲ 09 ಅಭ್ಯರ್ಥಿಗಳನ್ನು ಹೊರತುಪಡಿಸಿ ಸುಮಾರು 1000 ವಿಕಲಚೇತನ ಅಭ್ಯರ್ಥಿಗಳು ಲಿಪಿಕಾರರ ಮಾಹಿತಿಯನ್ನು ಒದಗಿಸಿರುವುದಿಲ್ಲ. ದಿನಾಂಕ. 22.12.2023ರ ಸಂಜೆ 5.00 ಗಂಟೆಗೆ ಸದರಿ ಲಿಂಕ್‌ನ್ನು ಮುಕ್ತಾಯಗೊಳಿಸಲಾಗುತ್ತದೆ.

ಕೆಸೆಟ್ 2023ರ ಅರ್ಜಿಯಲ್ಲಿ ವಿಕಲಚೇತನ ಮೀಸಲಾತಿಯನ್ನು ಕೋರಿರುವ ಅಭ್ಯರ್ಥಿಗಳು ಪ್ರಾಧಿಕಾರದಲ್ಲಿ ಪ್ರಕಟಿಸಿರುವ ಲಿಂಕ್‌ನಲ್ಲಿ ಅರ್ಜಿದಾರರ ಮತ್ತು ಲಿಪಿಕಾರರ ವಿವರಗಳನ್ನು ಕಡ್ಡಾಯವಾಗಿ ಕೂಡಲೇ ಸಲ್ಲಿಸಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in